PRESS CLIPPING

| News Paper | Edition | Date | Page | Reporter | Key Words |
|---|---|---|---|---|---|
| ಪ್ರಜಾವಾಣಿ | ಬೆಂಗಳೂರು | 17/06/2015 | 02 | | |




ಕಾರ್ಯಕ್ರಮದಲ್ಲಿ ಆರ್.ವಿ. ದೇಶಪಾಂಡೆ ಅವರ ಮಾತಿಗೆ ಎಸ್.ವಿ. ರಂಗನಾಥ್, ಡಾ. ಪಿ. ಬಾಲಕೃಷ್ಣ ಶೆಟ್ಟಿ, ಡಾ. ಬಿ.ಎನ್. ಸುರೇಶ್ ಹಾಗೂ ಪ್ರೊ. ಬಿ. ತಿಮ್ಮೇಗೌಡ ಅವರ ಮುಖದಲ್ಲಿ ಮಂದಹಾಸ ಮೂಡಿತು **ಪ್ರಜಾವಾಣಿ ಚಿತ್ರ**

# ಉಪನ್ಯಾಸಕರ ಕೊರತೆ ನೀಗಿಸುವ ಅಗತ್ಯ

## ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷ ರಂಗನಾಥ್ ಅಭಿಮತ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇರುವ ವಿಷಯವನ್ನು ಕಳೆದ 40 ವರ್ಷಗಳಿಂದ ಕೇಳುತ್ತಿದ್ದೇನೆ. ಆದರೆ, ಇಲ್ಲಿಯವರೆಗೆ ಆ ಸಮಸ್ಯೆ ಬಗೆಹರಿದಿಲ್ಲ' ಎಂದು ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷ ಎಸ್.ವಿ. ರಂಗನಾಥ್ ಅವರು ತಿಳಿಸಿದರು.

ಕರ್ನಾಟಕ ಜ್ಞಾನ ಆಯೋಗ ಮತ್ತು ಬೆಂಗಳೂರು ವಿಶ್ವವಿದ್ಯಾಲಯ ಜಂಟಿಯಾಗಿ ಮಂಗಳವಾರ ನಗರದ ಸೆಂಟ್ರಲ್ ಕಾಲೇಜಿನಲ್ಲಿ ಆಯೋಜಿಸಿದ್ದ 'ಉನ್ನತ ಶಿಕ್ಷಣದಲ್ಲಿ ತಂತ್ರಜ್ಞಾನದ ವಿಶ್ಲೇಷಣೆ' ಕುರಿತ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

'ಈಗಿನ ಪರಿಸ್ಥಿತಿ ನೋಡಿದರೆ ಮುಂದಿನ 40 ವರ್ಷಗಳವರೆಗೆ ಈ ಸಮಸ್ಯೆ ಬಗೆಹರಿಯುವ ಲಕ್ಷಣ ಕಾಣುತ್ತಿಲ್ಲ' ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಉನ್ನತ ಶಿಕ್ಷಣ ಸಚಿವ ಆರ್.ವಿ. ದೇಶಪಾಂಡೆ ಅವರು, 'ಯಾವ ರೀತಿಯ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಈಗಿನ ಶಿಕ್ಷಣ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸಬಹುದು ಹಾಗೂ ಆಧುನೀಕರಣಗೊಳಿಸಬಹುದು ಎಂಬುದು ನಮ್ಮ ಮುಂದಿರುವ ದೊಡ್ಡ ಸವಾಲು' ಎಂದರು.

'ಈಗಿನ ಸಂದರ್ಭಕ್ಕೆ ಬೇಕಿರುವುದು ಗುಣಮಟ್ಟ, ಕೌಶಲ ಹಾಗೂ ತಂತ್ರಜ್ಞಾನ ಆಧರಿತ ಶಿಕ್ಷಣ. ಏಕೆಂದರೆ ನಮ್ಮ ಯುವಕರನ್ನು ಜಾಗತಿಕ ಮಟ್ಟದ ಸ್ಪರ್ಧೆಗೆ ಅಣಿಗೊಳಿಸಬೇಕಾಗಿದೆ' ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಜ್ಞಾನ ಆಯೋಗ ಕಾರ್ಯತಂಡದ ಸಹ ಅಧ್ಯಕ್ಷ ಡಾ. ಬಿ.ಎನ್. ಸುರೇಶ್ ಅವರು ಮಾತನಾಡಿ, 'ತಂತ್ರಜ್ಞಾನದ ಹೊರತಾಗಿ ಈಗಿರುವ ಶಿಕ್ಷಣ ಪದ್ಧತಿಯನ್ನು ಬದಲಿಸಲು ಸಾಧ್ಯವಿಲ್ಲ' ಎಂದರು.

ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ. ತಿಮ್ಮೇಗೌಡ, ಕರ್ನಾಟಕ ಜ್ಞಾನ ಆಯೋಗ ಕಾರ್ಯತಂಡದ ಸಹ ಅಧ್ಯಕ್ಷ ಡಾ. ಪಿ. ಬಾಲಕೃಷ್ಣ ಶೆಟ್ಟಿ ಹಾಜರಿದ್ದರು.